**Akashvani : Bangalore**
**Regional Bulletin In Kannada**
**16.11.2024 / 18.40 hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

**೧. ಒಂದು ವರ್ಷದಲ್ಲಿ ಶೇಕಡ ೮೦ರಷ್ಟು ತಕರಾರು ಅರ್ಜಿ ವಿಲೇವಾರಿಗೊಳಿಸಿದ ಕಂದಾಯ ನ್ಯಾಯಾಲಯ**

**೨. ಬೆಂಗಳೂರಿನ ಕ್ರಾಂತಿವೀರ ಸಂಗೊಳ್ಳಿರಾಯಣ್ಣ, ಕೆಂಗೇರಿ ರೈಲು ನಿಲ್ದಾಣಗಳಲ್ಲಿ ಎಸ್ಕಲೇಟರ್ ಲೋಕಾರ್ಪಣೆಗೊಳಿಸಿದ ಕೇಂದ್ರ ಸಚಿವ ವಿ. ಸೋಮಣ್ಣ**

**೩. ರಾಜ್ಯದ ವಿವಿಧೆಡೆ ೬ ಲಕ್ಷಕ್ಕೂ ಹೆಚ್ಚು ವಿದ್ಯುತ್ ಪರಿವರ್ತಕ ಸ್ಥಾಪಿಸಲು ರಾಜ್ಯ ಸರ್ಕಾರ ನಿರ್ಧಾರ**

**೪. ಕೋವಿಡ್ ಹಗರಣದ ತನಿಖೆ ಹಿಂದೆ ಯಾವುದೇ ರಾಜಕೀಯ ದುರುದ್ದೇಶ ಇಲ್ಲ - ಸಚಿವ ದಿನೇಶ್ ಗುಂಡೂರಾವ್**

<><*<><>*><>

ಉಪವಿಭಾಗಾಧಿಕಾರಿ ನೇತೃತ್ವದ ಕಂದಾಯ ನ್ಯಾಯಾಲಯದಲ್ಲಿನ ಹಳೆಯ ತಕರಾರು ಅರ್ಜಿಗಳ ಪೈಕಿ ಶೇಕಡ ೮೦ರಷ್ಟು ಪ್ರಕರಣಗಳನ್ನು ಕಳೆದ ಒಂದು ವರ್ಷದಲ್ಲಿ ಇತ್ಯರ್ಥ ಪಡಿಸಲಾಗಿದೆ ಎಂದು ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ. ಇಂದು ವಿಕಾಸಸೌಧದಲ್ಲಿ ವಿಡಿಯೋ ಕಾನ್ಫರೆನ್ಸ್ ಮೂಲಕ ರಾಜ್ಯದ ಎಲ್ಲ ಉಪವಿಭಾಗಾಧಿಕಾರಿಗಳ ಜೊತೆ ಮಾಸಿಕ ಸಭೆ ನಡೆಸಿ ಮಾತನಾಡಿದ ಅವರು, ಬಾಕಿ ಪ್ರಕರಣಗಳ ವಿಲೇವಾರಿಯನ್ನು ಅಭಿಯಾನ ಮಾದರಿಯಲ್ಲಿ ಕೈಗೆತ್ತಿಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ. ಪ್ರಕರಣಗಳ ಇತ್ಯರ್ಥಕ್ಕಾಗಿಯೇ ೧೮ ಮಂದಿ ವಿಶೇಷ ಉಪವಿಭಾಗಾಧಿಕಾರಿಗಳನ್ನು ನೇಮಕ ಮಾಡಲಾಗಿದೆ. ಜನವರಿ, ಫೆಬ್ರವರಿ ಒಳಗೆ ಎಲ್ಲಾ ಹಳೆ ಪ್ರಕರಣಗಳ ಇತ್ಯರ್ಥದ ಗುರಿ ಹೊಂದಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಉಪವಿಭಾಗಾಧಿಕಾರಿಗಳು ವಾರಕ್ಕೆ ನಾಲ್ಕು, ವಿಶೇಷ ಉಪವಿಭಾಗಾಧಿಕಾರಿಗಳು ವಾರಕ್ಕೆ ಎರಡು ಪ್ರಕರಣವನ್ನು ವಿಲೇವಾರಿಗೊಳಿಸಬೇಕು ಎಂದು ಸೂಚಿಸಿದ್ದಾರೆ.

<><*<><>*><>

ಬೆಂಗಳೂರಿನ ಕ್ರಾಂತಿವೀರ ಸಂಗೊಳ್ಳಿರಾಯಣ್ಣ, ಕೆಂಗೇರಿ ರೈಲು ನಿಲ್ದಾಣಗಳಲ್ಲಿ ಇಂದು ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಎಸ್ಕಲೇಟರ್‌ಗಳನ್ನು ಲೋಕಾರ್ಪಣೆಗೊಳಿಸಿದರು. ಬಳಿಕ ಮಾತನಾಡಿದ ಅವರು, ಇದು ಪ್ರಯಾಣಿಕರಿಗೆ, ವಿಶೇಷವಾಗಿ ವೃದ್ಧರು ಮತ್ತು ಅಂಗವಿಕಲರಿಗೆ ಹೆಚ್ಚಿನ ಪ್ರಯೋಜನ ನೀಡಲಿದೆ ಎಂದರು. ಭಾರತೀಯ ರೈಲ್ವೆಯು ಪ್ರಯಾಣಿಕರ ಸೌಕರ್ಯಗಳನ್ನು ಸುಧಾರಿಸಲು ಮತ್ತು ನಿಲ್ದಾಣಗಳಾದ್ಯಂತ ಸೌಲಭ್ಯಗಳನ್ನು ಹೆಚ್ಚಿಸಲು ಬದ್ಧವಾಗಿದೆ ಎಂದು ಅವರು ಪುನರುಚ್ಚರಿಸಿದರು. ಕೆಎಸ್‌ಆರ್ ಬೆಂಗಳೂರು ನಿಲ್ದಾಣದಲ್ಲಿ ಪ್ಲಾಟ್‌ಫಾರ್ಮ್ ನಂ.೧ ರಲ್ಲಿ ೨ ಕೋಟಿ ೮ ಲಕ್ಷ ವೆಚ್ಚದಲ್ಲಿ ಎರಡು ಹೊಸ ಎಸ್ಕಲೇಟರ್‌ಗಳನ್ನು ಒದಗಿಸಲಾಗಿದ್ದು, ಇದು ನಿಲ್ದಾಣದ ಎಲ್ಲಾ ೧೦ ಪ್ಲಾಟ್‌ಫಾರ್ಮ್‌ಗಳನ್ನು ಸಂಪರ್ಕಿಸಲಿದೆ. ಕೆಂಗೇರಿ ರೈಲು ನಿಲ್ದಾಣದಲ್ಲಿ ಪ್ಲಾಟ್‌ಫಾರ್ಮ್ ೧ರಲ್ಲಿ ಅಂದಾಜು ೧ ಕೋಟಿ ೬ ಲಕ್ಷ ವೆಚ್ಚದಲ್ಲಿ ಒಂದು ಎಸ್ಕಲೇಟರ್ ಅಳವಡಿಸಲಾಗಿದ್ದು, ಇದು ೧ರಿಂದ ೪ರವರೆಗಿನ ಎಲ್ಲಾ ಪ್ಲಾಟ್‌ಫಾರ್ಮ್‌ಗಳನ್ನು ಸಂಪರ್ಕಿಸಲಿದೆ. ಈ ವೇಳೆ ಕಾರ್ಮಿಕ ಮತ್ತು ಉದ್ಯೋಗ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಉಪಸ್ಥಿತರಿದ್ದರು.

<><*<><>*><>

ರಾಜ್ಯ ಸರ್ಕಾರ ವಿವಿಧ ಕಡೆಗಳಲ್ಲಿ ೬ ಲಕ್ಷಕ್ಕೂ ಹೆಚ್ಚು ವಿದ್ಯುತ್ ಪರಿವರ್ತಕಗಳನ್ನು ಸ್ಥಾಪಿಸಲು ಮುಂದಾಗಿದೆ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ತಿಳಿಸಿದ್ದಾರೆ. ಮಡಿಕೇರಿಯಲ್ಲಿ ಇಂಧನ ಇಲಾಖೆಗೆ ಸಂಬಂಧಿಸಿದಂತೆ ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದ ಅವರು, ವಿವಿಧ ವಿದ್ಯುತ್ ಉಪಕೇಂದ್ರಗಳ ಸ್ಥಾಪನೆಗೆ ೨೦೮ ಕೋಟಿ ರೂಪಾಯಿ ವಿನಿಯೋಗ ಮಾಡಲಾಗುವುದು ಎಂದು ಹೇಳಿದ್ದಾರೆ. ಅಕ್ರಮ ಸಕ್ರಮ ಅರ್ಜಿಗಳನ್ನು ಪರಿಶೀಲಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಅವರು, ರಾಜ್ಯದಲ್ಲಿ ಅಗತ್ಯವಿರುವ ಕಡೆ

ಸೋಲಾರ್ ಬಳಕೆಗೆ ಹೆಚ್ಚಿನ ಉತ್ತೇಜನ ನೀಡಲಾಗುವುದು ಎಂದರು. ಕೊಡಗು ಜಿಲ್ಲೆಯ ಹಾಡಿಗಳು ಸೇರಿದಂತೆ ಎಲ್ಲಾ ಕುಗ್ರಾಮಗಳಿಗೂ ವಿದ್ಯುತ್ ಸಂಪರ್ಕ ಕಲ್ಪಿಸಲಾಗುವುದು. ಆ ನಿಟ್ಟಿನಲ್ಲಿ ಸೆಸ್ಕಾಂ ಮತ್ತು ಅರಣ್ಯ ಇಲಾಖೆ ಅಧಿಕಾರಿಗಳು ಜಂಟಿಯಾಗಿ ಕಾರ್ಯ ನಿರ್ವಹಿಸುವಂತೆ ಸಚಿವರು ಸೂಚಿಸಿದ್ದಾರೆ.

**<><*<><>*><>**

ಕೋವಿಡ್ ಹಗರಣದ ಕುರಿತು ನಿಯಮ ಬದ್ಧವಾಗಿ ಮತ್ತು ಕಾನೂನು ಪ್ರಕಾರವೇ ತನಿಖೆ ಮುಂದುವರಿದಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ದಿನೇಶ್ ಗುಂಡೂರಾವ್ ಸ್ಪಷ್ಟಪಡಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೋವಿಡ್ ಹಗರಣದ ಕುರಿತು ತನಿಖೆ ನಡೆಸಿದ ನ್ಯಾಯಮೂರ್ತಿ ಡಿ. ಕುನ್ಹಾ ಮೊದಲ ವರದಿ ನೀಡಿದ್ದಾರೆ. ಎರಡನೇ ಮತ್ತು ಕೊನೆಯ ವರದಿ ನೀಡಬೇಕಾಗಿದ್ದು, ಪ್ರಥಮ ವರದಿಯಲ್ಲಿ ಕೋವಿಡ್ ಸಂದರ್ಭದ ಅವ್ಯವಹಾರಗಳ ಬಗ್ಗೆ ಸ್ಪಷ್ಟವಾಗಿ ಉಲ್ಲೇಖ ಮಾಡಲಾಗಿದೆ ಎಂದು ಹೇಳಿದ್ದಾರೆ. ಹಗರಣದ ತನಿಖೆಯ ಹಿಂದೆ ಯಾವುದೇ ರಾಜಕೀಯ ದುರುದ್ದೇಶ ಇಲ್ಲ. ವರದಿ ಆಧಾರದಲ್ಲಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

**<><*<><>*><>**

ಕರ್ನಾಟಕ ಸುವರ್ಣ ಸಂಭ್ರಮದ ಅಂಗವಾಗಿ ಮಂಗಳೂರಿನಲ್ಲಿ ಡಿಸೆಂಬರ್ ೩ ಮತ್ತು ೪ ರಂದು ನಡೆಯಲಿರುವ ಬಹುಸಂಸ್ಕೃತಿ ಉತ್ಸವದ ಲಾಂಛನವನ್ನು ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಬಿಡುಗಡೆಗೊಳಿಸಿದರು. ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ಕಚೇರಿಯಲ್ಲಿಂದು ನಡೆದ ಸರಳ ಸಮಾರಂಭದಲ್ಲಿ ಲಾಂಛನ ಬಿಡುಗಡೆಗೊಳಿಸಿ ಮಾತನಾಡಿದ ಅವರು, ಕಾರ್ಯಕ್ರಮ ಯಶಸ್ವಿಯಾಗಿ ನಡೆಯಬೇಕು. ಈ ನಿಟ್ಟಿನಲ್ಲಿ ಅಗತ್ಯ ಸಿದ್ಧತೆಗಳನ್ನು ಈಗಿನಿಂದಲೇ ಆರಂಭಿಸಬೇಕು ಎಂದು ಸೂಚನೆ ನೀಡಿದರು. ಜಿಲ್ಲಾಡಳಿತದ ಸಹಯೋಗದೊಂದಿಗೆ ಕರ್ನಾಟಕ ತುಳು ಸಾಹಿತ್ಯ ಅಕಾಡೆಮಿ, ಬ್ಯಾರಿ, ಕೊಂಕಣಿ, ಅರೆಭಾಷೆ, ಕೊಡವ ಮತ್ತು ಯಕ್ಷಗಾನ ಅಕಾಡೆಮಿಗಳ ಜಂಟಿ ಆಶ್ರಯದಲ್ಲಿ ಬಹುಸಂಸ್ಕೃತಿ ಉತ್ಸವ ನಡೆಯಲಿದೆ.

**<><*<><>*><>**

ಪ್ರಾಣಿಗಳ ನಡುವಿನ ಆಕ್ರಮಣಕಾರಿ ಸ್ವಭಾವವನ್ನು ನಿಯಂತ್ರಿಸಲು, ಆಹಾರ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಪಶು ಸಂಗೋಪನಾ ವಿಭಾಗದ ವಿಶೇಷ ಆಯುಕ್ತ ಸುರಳ್ಕರ್ ವಿಕಾಸ್ ಕಿಶೋರ್ ತಿಳಿಸಿದ್ದಾರೆ. ಸಮುದಾಯದ ನಾಯಿಗಳಿಗೆ ದಿನಕ್ಕೆ ಒಂದು ಹೊತ್ತಿನ ಆಹಾರ ನೀಡುವುದರಿಂದ, ಆಹಾರ ಹುಡುಕುವ ಮತ್ತು ಆಹಾರಕ್ಕಾಗಿ ಹೋರಾಡುವ ಅಗತ್ಯವನ್ನು ಕಡಿಮೆ ಮಾಡಲಿದೆ. ಬೆಂಗಳೂರಿನ ೧೮ ವಿಧಾನಸಭಾ ಕ್ಷೇತ್ರಗಳಲ್ಲಿ ಸಮುದಾಯದ ನಾಯಿಗಳಿಗೆ ಪೂರ್ಣ ಪ್ರಮಾಣದಲ್ಲಿ ಆಹಾರ ನೀಡಲು ತಯಾರಿ ನಡೆಸುತ್ತಿದ್ದು, ಪ್ರತಿ ಕ್ಷೇತ್ರದಲ್ಲಿ ಕನಿಷ್ಠ ೫ ಆಹಾರ ನೀಡುವ ಸ್ಥಳಗಳನ್ನು ನಿಗದಿಪಡಿಸಲು ಸೂಚಿಸಲಾಗಿದೆ ಎಂದು ಹೇಳಿದ್ದಾರೆ.

**<><*<><>*><>**

ಹೃದಯಘಾತವಾದಾಗ ಪ್ರಥಮ ಚಿಕಿತ್ಸೆಗೆ ಸಂಬಂಧಿಸಿದಂತೆ ಸುಮಾರು ೧೫ ಸಾವಿರ ಮೌಲ್ಯದ ಲಸಿಕೆ ಈಗ ವಿಜಯನಗರ ಜಿಲ್ಲೆಯ ಸರ್ಕಾರಿ ಆಸ್ಪತ್ರೆಯಲ್ಲಿ ಲಭ್ಯವಿದ್ದು ಸಾರ್ವಜನಿಕರು ಇದರ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಶಾಸಕ ಹೆಚ್.ಆರ್ ಗವಿಯಪ್ಪ ತಿಳಿಸಿದ್ದಾರೆ. ಇದೇ ಸಂದರ್ಭದಲ್ಲಿ ಅವರು ನವಜಾತಶಿಶುಗಳಿಗೆ ಪೋಲಿಯೋ ಹನಿ ನೀಡಿ ಲಸಿಕಾ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ರಾಜ್ಯದಲ್ಲಿಯೇ ಪ್ರಪ್ರಥಮವಾಗಿ ಆರಂಭಗೊಂಡ ಮಾದರಿ ಲಸಿಕಾ ಕೇಂದ್ರದ ಬಗ್ಗೆ ಜಿಲ್ಲಾ ಆರ್‌ಸಿಎಚ್ ಅಧಿಕಾರಿ ಡಾ. ಜಂಬಯ್ಯ ಆಕಾಶವಾಣಿಗೆ ವಿಶೇಷ ಮಾಹಿತಿ ನೀಡಿದ್ದಾರೆ.

**<><*<><>*><>**

ಗದಗ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಬೇಟಿ 'ಬಚಾವೋ ಬೇಟಿ ಪಡಾವೋ' ಯೋಜನೆಯಡಿಯಲ್ಲಿ ಹೆಣ್ಣು ಭ್ರೂಣ ಹತ್ಯೆ ತಡೆಯಲು ಹಾಗೂ ಹೆಣ್ಣು ಮಕ್ಕಳ ಶಿಕ್ಷಣವನ್ನು ಪ್ರೋತ್ಸಾಹಿಸಲು ಜಾಗೃತಿ ಕಾರ್ಯಕ್ರಮ ನಡೆಯಿತು. ಈ ಕಾರ್ಯಕ್ರಮಕ್ಕೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾದಿಕಾರಿ ಭರತ್ ಎಸ್ ಚಾಲನೆ ನೀಡಿದರು. ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಮಹಿಳಾ

ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಪದ್ಮಾವತಿ ಜಿ, ಜಿಲ್ಲಾ ನಿರೂಪಣಾಧಿಕಾರಿಗಳು ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣಾಧಿಕಾರಿ ರಾಧಾ ಮಣ್ಣೂರ ಸೇರಿದಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳು ಮತ್ತು ಸಿಬ್ಬಂದಿ ಹಾಜರಿದ್ದರು.

**<><*<><>*><>**

ಹಾವೇರಿ ಜಿಲ್ಲೆಯ ವಿವಿಧ ತಾಲ್ಲೂಕಿನ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಆವರಣದಲ್ಲಿ ಮುಂಗಾರು ಹಂಗಾಮಿನ ಶೇಂಗಾ, ಭತ್ತ, ಬಿಳಿ ಜೋಳ ಹಾಗೂ ರಾಗಿ ಖರೀದಿ ಕೇಂದ್ರ ಆರಂಭಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ. ಕೇಂದ್ರ ಸರ್ಕಾರದ ಖರೀದಿ ಸಂಸ್ಥೆಯಾಗಿ ನಾಫೆಡ್ ಹಾಗೂ ರಾಜ್ಯ ಸರ್ಕಾರದಿಂದ ಕರ್ನಾಟಕ ಸಹಕಾರಿ ಎಣ್ಣೆ ಬೀಜ ಬೆಳೆಗಾರರ ಮಹಾ ಮಂಡಳಿ ನಿಯಮಿತ ಸಂಸ್ಥೆಯನ್ನು ಖರೀದಿ ಸಂಸ್ಥೆಯಾಗಿ ನೇಮಿಸಿ ಆದೇಶಿಸಲಾಗಿದೆ ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದ್ದಾರೆ.

**<><*<><>*><>**

ಕೊಡವರ ಸಂಸ್ಕೃತಿ ಹಾಗೂ ಭಾಷೆಯನ್ನು ಉಳಿಸಿಕೊಂಡು ಹೋಗುವ ಕಾರ್ಯ ಕರ್ನಾಟಕ ಕೊಡವ ಸಾಹಿತ್ಯ ಅಕಾಡೆಮಿಯಿಂದ ಆಗಬೇಕಿದೆ ಎಂದು ಶಾಸಕ ಡಾ.ಮಂತರ್ ಗೌಡ ತಿಳಿಸಿದ್ದಾರೆ. ಮಡಿಕೇರಿ ತಾಲೂಕಿನ ಅರೆಕಾಡು ಗ್ರಾಮದಲ್ಲಿ ಕೊಡವ ಅಕಾಡೆಮಿಯಿಂದ ಆಯೋಜಿತ ಗ್ರಾಮೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಕೊಡವ ಸಾಂಸ್ಕಂತಿಕ ಹಬ್ಬವನ್ನು ಆಚರಿಸುವುದರ ಜೊತೆಗೆ ಆಯಾಯ ಊರು-ನಾಡಿನ ಯುವ ಜನಾಂಗದ ಪಾಲ್ಗೊಳ್ಳುವಿಕೆಗೆ ಪೂರಕವಾದ ವಾತಾವರಣ ನಿರ್ಮಾಣ ಆಗಬೇಕಿದೆ. ಹೊರಗೆ ನೆಲೆಸಿರುವ ಯುವಕರನ್ನು ಕೊಡಗಿನಲ್ಲಿಯೇ ನೆಲೆಸುವಂತೆ ಮಾಡಬೇಕು ಎಂದು ಹೇಳಿದ್ದಾರೆ.

**<><*<><>*><>**

ಜಲ ಜೀವನ್ ಮೀಷನ್ ಯೋಜನೆಯಡಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಕಾಲೋನಿಯಲ್ಲಿನ ಪ್ರತಿಯೊಂದು ಮನೆಗೂ ನಳ ಸಂಪರ್ಕ ಒದಗಿಸಿ ನೀರು ಒದಗಿಸಬೇಕು ಎಂದು ಕರ್ನಾಟಕ ವಿಧಾನ ಮಂಡಲ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ ಅಧ್ಯಕ್ಷ ಪಿ.ಎಂ.ನರೇಂದ್ರ ಸ್ವಾಮಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಈ ಕುರಿತು ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು ಖುದ್ದಾಗಿ ಭೇಟಿ ನೀಡಿ ಕಾಮಗಾರಿಗಳನ್ನು ಪರಿಶೀಲಿಸುವಂತೆ ತಿಳಿಸಿದ್ದಾರೆ. ಅಪೌಷ್ಠಿಕತೆಯಿಂದ ಬಳಲುತ್ತಿರುವ ಮಕ್ಕಳ ಆರೋಗ್ಯ ಸುಧಾರಣೆಗಾಗಿ ಇರುವ ಕಾರ್ಯಕ್ರಮಗಳನ್ನು ಸಮರ್ಪಕವಾಗಿ ಜಾರಿಗೊಳಿಸುವ ಮೂಲಕ ಅಪೌಷ್ಠಿಕತೆ ನಿವಾರಣೆಗೆ ಮುಂದಾಗಬೇಕು ಎಂದು ನಿರ್ದೇಶನ ನೀಡಿದ್ದಾರೆ.

**<><*<><>*><>**

ಸಂಕ್ಷಿಪ್ತ ಸುದ್ದಿಗಳು

೧. ಜೀವನದಲ್ಲಿ ಯಶಸ್ಸು ಸಾಧಿಸಬೇಕಾದರೆ ಶತತ ಪ್ರಯತ್ನ ಮತ್ತು ಪೂರ್ವ ಸಿದ್ಧತೆ ಅತ್ಯಗತ್ಯ ಎಂದು ಕೊಡಗು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್ ಪ್ರತಿಪಾದಿಸಿದ್ದಾರೆ.

೨. ಸಹಕಾರ ಕ್ಷೇತ್ರದಲ್ಲಿನ ಗಣನೀಯ ಸಾಧನೆಯನ್ನು ಗುರುತಿಸಿ ಸರ್ಕಾರದಿಂದ ಕೋಲಾರ ವಿಧಾನಸಭಾ ಕ್ಷೇತ್ರದ ಶಾಸಕ ಹಾಗೂ ಮುಳಬಾಗಿಲು ಟಿಎಪಿಸಿಎಂಎಸ್ ಅಧ್ಯಕ್ಷ ಕೊತ್ತೂರು ಜಿ ಮಂಜುನಾಥ್ ಅವರನ್ನು ಆಯ್ಕೆ ಮಾಡಲಾಗಿದೆ.

೩. ಪ್ಲಾಂಟೇಷನ್ ಬೆಳೆಗಳನ್ನು ಬೆಳೆಯುತ್ತಿರುವ ಸರ್ಕಾರಿ ಜಮೀನುಗಳನ್ನು ಗುತ್ತಿಗೆ ನೀಡುವ ಸಂಬಂಧ ಅರ್ಜಿ ಸ್ವೀಕರಿಸುವ ಕಾಲಾವಕಾಶವನ್ನು ಡಿಸೆಂಬರ್ ೩೧ ರವರೆಗೆ ವಿಸ್ತರಿಸಲಾಗಿರುತ್ತದೆ ಎಂದು ಕೊಡಗು ಜಿಲ್ಲಾಧಿಕಾರಿ ವೆಂಕಟ್ ರಾಜಾ ತಿಳಿಸಿದ್ದಾರೆ.

೪. ಬೆಂಗಳೂರಿನ ಆರ್.ಆರ್ ನಗರ ವಲಯದ ವಾಜರಹಳ್ಳಿಯ ವ್ಯಾಪ್ತಿಯಲ್ಲಿ ಬಿಬಿಎಂಪಿ ನಕ್ಷೆ ಮಂಜೂರಾತಿಗಿಂತ ಹೆಚ್ಚುವರಿಯಾಗಿ ಅನಧಿಕೃತವಾಗಿ ನಿರ್ಮಿಸಿದ ೨ ಅಂತಸ್ತುಗಳ ತೆರವು ಕಾರ್ಯಾಚರಣೆ ನಡೆಸಿತು.

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೮.೩೫ ಕ್ಕೆ <>*><>**